# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ * ಸಂಖ್ಯೆ | : ( 2022) 217 |
| ಉತ್ತರಿಸಬೇಕಾದ ದಿನಾಂಕ | : 25.03.2026 |
| ಮಾನ್ಯ ಸದಸ್ಯರ ಹೆಸರು | : ಶ್ರೀ ಐವನ್ ಡಿ' ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್, ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕ್ರೈಸ್ತ ಅಭಿವೃದ್ಧಿ ನಿಗಮಕ್ಕೆ ಸ್ವಂತ ಕಟ್ಟಡ ಒದಗಿಸಿಕೊಡಲು ಸರ್ಕಾರ ವಹಿಸಿದ ಕ್ರಮವೇನು; ಎಲ್ಲಿ ಯಾವ ಸ್ಥಳದಲ್ಲಿ ಮಾಡಲಾಗುವುದು; ಅದಕ್ಕಾಗಿ ಮೀಸಲಿಟ್ಟ ಹಣ ಎಷ್ಟು: (ವಿವರ ನೀಡುವುದು) | ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮವು ಪ್ರಸ್ತುತ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ನಿಗಮದ ಸ್ವಂತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ) | ಸದರಿ ನಿಗಮ ರಾಜ್ಯಾದ್ಯಂತ ಕಾರ್ಯನಿರ್ವಹಣೆ ಮಾಡಲು ಯಾವ ಯಾವ ಕೇಂದ್ರಗಳಲ್ಲಿ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ; ಯಾವ ಯಾವ ಹಂತದ ಅಧಿಕಾರಿಗಳು ಅದರ ಉಸ್ತುವಾರಿಯನ್ನು ವಹಿಸಲಿರುವರು; (ಈ ಬಗ್ಗೆ ಸ್ಪಷ್ಟ ಮಾಹಿತಿ ನೀಡುವುದು) | ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕಾಮಗಾರಿ ಆಧಾರಿತ ಯೋಜನೆ/ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಮೂಲಕ ಮತ್ತು ಸಾಲಸೌಲಭ್ಯ/ ಸಹಾಯಧನ ಯೋಜನೆಗಳನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಮೂಲಕ ನಿರ್ವಹಿಸಲಾಗುತ್ತಿದೆ.<br><br>ಮುಂದುವರೆದು, ನಿಗಮದ ಕೇಂದ್ರ ಕಛೇರಿ ಮಟ್ಟದಲ್ಲಿ ಸದರಿ ಯೋಜನೆ/ಕಾರ್ಯಕ್ರಮಗಳು/ ಸಾಲಸೌಲಭ್ಯ/ಸಹಾಯಧನ ಯೋಜನೆಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ ನಿಗಮ ಇವರ ಉಸ್ತುವಾರಿಯಲ್ಲಿ ನಿರ್ವಹಿಸಲಾಗುತ್ತಿದೆ. |
| ಇ) | ಕ್ರೈಸ್ತ ಸಮುದಾಯದ ಮತ್ತು ಜನಜೀವನ ಕಸುಬು, ಆರ್ಥಿಕ ಪರಿಸ್ಥಿತಿ ಶಿಕ್ಷಣದ ಸ್ಥಿತಿಗತಿ ಬಗ್ಗೆ ರಾಜ್ಯ ಸರ್ಕಾರ ಅಂಕಿಅಂಶಗಳ ವರದಿಯನ್ನು ಪಡೆದಿದೆಯೇ; (ವಿವರ ನೀಡುವುದು) | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸಿದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2025ರಲ್ಲಿ ಕ್ರೈಸ್ತ ಸಮುದಾಯಗಳನ್ನು ಒಳಗೊಂಡಂತೆ ಎಲ್ಲಾ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಅಂಕಿ ಅಂಶಗಳನ್ನು ಸಂಗ್ರಹಿಸಿದ್ದು, ವರದಿ ಸಿದ್ಧಪಡಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. |

| | | |
|---|---|---|
| ಈ) | ಕ್ರೈಸ್ತ ಸಮುದಾಯ ಈಗ 3 ಬಿ ಯಲ್ಲಿದ್ದು ಇವರು 2 ಬಿ ಸೇರಿಸಬೇಕೆಂಬ ಅಥವಾ 2 ಸಿ ಹೊಸ ಗುಂಪನ್ನು ಸೃಷ್ಟಿಸಿ, ನೂತನ ಗುಂಪನ್ನು ಮಾಡಬೇಕೆಂಬ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಕ್ರೈಸ್ತ ಸಮುದಾಯ/ಪಂಗಡದಿಂದ ಈ ಸಂಬಂಧ ಯಾವುದೇ ಬೇಡಿಕೆಯ ಪ್ರಸ್ತಾವನೆ/ಮನವಿಗಳು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. |
| ಉ) | ಕ್ರೈಸ್ತ ಸಮುದಾಯದವರು ಬೇರೆ ಸಮುದಾಯದಂತೆ ತಮ್ಮ ಪವಿತ್ರ ಯಾತ್ರಾ ಸ್ಥಳವಾದ ಜೆರೂಸಲಾಮ್‌ಗೆ ತೆರಳಲು ಅವಕಾಶ ಮಾಡಿಕೊಡಬೇಕೆಂಬ ಕ್ರೈಸ್ತ ಸಮುದಾಯದವರ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಕ್ರೈಸ್ತ ಸಮುದಾಯದವರು ಬೇರೆ ಸಮುದಾಯದಂತೆ ತಮ್ಮ ಪವಿತ್ರ ಯಾತ್ರಾ ಸ್ಥಳವಾದ ಜೆರೂಸಲಾಮ್‌ಗೆ ತೆರಳಲು ಅವಕಾಶ ಮಾಡಿಕೊಡಬೇಕೆಂಬ ಬೇಡಿಕೆಯು ಬಂದಿದ್ದು, ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ**: MWD-LMQ/75/2026

**(ಬಿ. ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು